ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ   ದಿನಾಂಕ : DATE : 2/6/2020

# ಬೆಂಬಲ ಬೆಲೆ ಹೆಚ್ಚಳ

ಪ್ರ. ವಾ. 2-6-2020

## ಕೃಷಿಗೆ ಒತ್ತು: ಕೇಂದ್ರ ಸಂಪುಟ ಸಭೆಯಲ್ಲಿ ತೀರ್ಮಾನ

ನವದೆಹಲಿ (ಪಿಟಿಐ): ರೈತರ ಆದಾಯವನ್ನು ಹೆಚ್ಚಿಸುವ ಉದ್ದೇಶದಿಂದ ಕೇಂದ್ರ ಸಚಿವ ಸಂಪುಟವು ಮುಂಗಾರು ಹಂಗಾಮಿನ 14 ಕೃಷಿ ಉತ್ಪನ್ನಗಳ ಬೆಂಬಲ ಬೆಲೆಯನ್ನು ಹೆಚ್ಚಿಸಲು ತೀರ್ಮಾನಿಸಿದೆ.

ಜತೆಗೆ, ಕೃಷಿ ಮತ್ತು ಅದಕ್ಕೆ ಸಂಬಂಧಿಸಿದ ಉದ್ದೇಶಕ್ಕಾಗಿ ಪಡೆದ ಗರಿಷ್ಠ ₹3 ಲಕ್ಷವರೆಗಿನ ಅಲ್ಪಾವಧಿ ಕೃಷಿ ಸಾಲದ ಮರುಪಾವತಿ ಅವಧಿಯನ್ನು ಆಗಸ್ಟ್ 31ರವರೆಗೆ ವಿಸ್ತರಿಸಲು ತೀರ್ಮಾನಿಸಿದೆ.

'ಕೃಷಿ ವೆಚ್ಚಗಳು ಮತ್ತು ಬೆಲೆ ಆಯೋಗದ (ಸಿಎಪಿಸಿ) ಶಿಫಾರಸುಗಳ ಆಧಾರದಲ್ಲಿ 2020–21ನೇ ಸಾಲಿನ ಮುಂಗಾರು ಹಂಗಾಮಿನ 14 ಬೆಳೆಗಳ ಬೆಂಬಲ ಬೆಲೆ ಹೆಚ್ಚಿಸಲು ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಸೋಮವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಇದರಿಂದಾಗಿ ಕೃಷಿಗೆ ಮಾಡಿರುವ ವೆಚ್ಚಕ್ಕಿಂತ ಶೇ 50ರಿಂದ 83ರಷ್ಟು ಹೆಚ್ಚಿನ ಆದಾಯ ಗಳಿಸಲು ರೈತರಿಗೆ ಸಾಧ್ಯವಾಗಲಿದೆ. ಇದಲ್ಲದೆ ಸಕಾಲದಲ್ಲಿ ಸಾಲ ಮರುಪಾವತಿಸುವ ರೈತರಿಗೆ ಶೇ 3ರಷ್ಟು ಪ್ರೋತ್ಸಾಹ ಧನ ನೀಡಲು ತೀರ್ಮಾನಿಸಲಾಗಿದೆ. ಇದರಿಂದಾಗಿ ಕಡಿಮೆ ವಾರ್ಷಿಕ ಬಡ್ಡಿದರದಲ್ಲಿ ಸಾಲ ಪಡೆಯಲು ರೈತರಿಗೆ ಸಾಧ್ಯವಾಗಲಿದೆ' ಎಂದು ಕೇಂದ್ರದ ಕೃಷಿ ಸಚಿವ ನರೇಂದ್ರಸಿಂಗ್ ತೋಮರ್ ತಿಳಿಸಿದರು.

'ಉತ್ಪಾದನಾ ವೆಚ್ಚದ ಒಂದೂವರೆ ಪಟ್ಟು ಆದಾಯ ರೈತರಿಗೆ ಲಭಿಸಬೇಕು ಎಂದು 2018–19ರಲ್ಲಿ ರೂಪಿಸಿದ್ದ ನೀತಿಯನ್ನು ಮುಂದಿಟ್ಟುಕೊಂಡು ಬೆಂಬಲ ಬೆಲೆ ನಿಗದಿ ಮಾಡಲಾಗಿದೆ' ಎಂದು ಅವರು ತಿಳಿಸಿದರು.

ಭತ್ತದ ಬೆಂಬಲ ಬೆಲೆಯಲ್ಲಿ ಸ್ವಲ್ಪ ಏರಿಕೆಯಾಗಿದ್ದರೆ, ಎಣ್ಣೆಬೀಜ, ಬೇಳೆಕಾಳು ಹಾಗೂ ಸಿರಿ ಧಾನ್ಯಗಳ ಬೆಂಬಲ ಬೆಲೆಯಲ್ಲಿ ಗಣನೀಯ ಏರಿಕೆ ಮಾಡಲಾಗಿದೆ. ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಉತ್ತೇಜನಕ್ಕಾಗಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಈಚೆಗೆ ಘೋಷಿಸಿದ್ದ ವಿಶೇಷ ಪ್ಯಾಕೇಜ್ ಜಾರಿಗೆ ರೂಪಿಸಿರುವ ನೀಲನಕ್ಷೆಗೂ ಸಂಪುಟ ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಯಿತು.

'ಸ್ವನಿಧಿ' ಸಾಲ: ಬೀದಿಬದಿ ವ್ಯಾಪಾರಿಗಳಿಗೆ ದುಡಿಯುವ ಬಂಡವಾಳಕ್ಕೆ ಸಾಲ ನೀಡುವ 'ಸ್ವನಿಧಿ' ಸಾಲ ಯೋಜನೆಗೆ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ. ಈ ಯೋಜನೆಯಡಿ ಬೀದಿಬದಿ ವ್ಯಾಪಾರಿಗಳು ಗರಿಷ್ಠ ₹ 10,000 ಸಾಲ ಪಡೆಯಬಹುದಾಗಿದ್ದು, ಇದನ್ನು ಒಂದು ವರ್ಷದಲ್ಲಿ ಸಮಾನ ಕಂತುಗಳಲ್ಲಿ ಮರುಪಾವತಿ ಮಾಡಬೇಕಾಗುತ್ತದೆ.

'ಈ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡುವ ವ್ಯಾಪಾರಿಗಳಿಗೆ ಶೇ 7ರಷ್ಟು ಸಬ್ಸಿಡಿ ಲಭಿಸಲಿದ್ದು, ಆ ಮೊತ್ತವನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗುವುದು. ಸುಮಾರು 50 ಲಕ್ಷ ವ್ಯಾಪಾರಿಗಳು ಈ ಯೋಜನೆಯ ಲಾಭ ಪಡೆಯಲಿದ್ದಾರೆ' ಎಂದು ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಪ್ರಕಾಶ್ ಜಾವಡೇಕರ್ ತಿಳಿಸಿದರು.

## 'ಭರವಸೆ ಈಡೇರಿಸಿದ್ದೇವೆ'



'ಸಂಪುಟದ ತೀರ್ಮಾನವು ದೇಶದ ರೈತರು ಹಾಗೂ ಕಾರ್ಮಿಕರ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆ ತರಲಿದೆ. ರೈತರು ಸಮೃದ್ಧರಾದರೆ ಭಾರತ ಸಮೃದ್ಧವಾಗುತ್ತದೆ' ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಸಚಿವ ಸಂಪುಟ ಸಭೆಯ ನಂತರ ಸರಣಿ ಟ್ವೀಟ್ ಮಾಡಿದ ಅವರು, 'ಇಂದು ತೆಗೆದುಕೊಂಡ ತೀರ್ಮಾನಗಳಿಂದ ರೈತರು, ರಸ್ತೆಬದಿ ವ್ಯಾಪಾರಿಗಳು, ಸಣ್ಣ, ಅತಿಸಣ್ಣ ಹಾಗೂ ಮಧ್ಯಮ ಗಾತ್ರದ ಕೈಗಾರಿಕೆಗಳಿಗೆ ಭಾರಿ ಪ್ರಮಾಣದ ಲಾಭವಾಗಲಿದೆ. ಶ್ರಮಜೀವಿ ರೈತರಿಗೆ ನೀಡಿದ್ದ ಭರವಸೆಗಳನ್ನು ನಮ್ಮ ಸರ್ಕಾರ ಈಡೇರಿಸಿದೆ' ಎಂದಿದ್ದಾರೆ.

**ಬೆಂಬಲಬೆಲೆ (ಕ್ವಿಂಟಲ್‌ಗೆ ₹ ಗಳಲ್ಲಿ)**

| ಉತ್ಪನ್ನ | ಏರಿಕೆ | ಬೆಂಬಲ ಬೆಲೆ |
|---|---|---|
| ಭತ್ತ | 53 | 1,868 |
| ಹತ್ತಿ (ಸಾಮಾನ್ಯ) | 260 | 5,515 |
| ಹತ್ತಿ (ಉದ್ದ ಎಳೆ) | 275 | 5,825 |
| ಜೋಳ | 640 | 2,640 |
| ರಾಗಿ | 145 | 3,295 |
| ಮೆಕ್ಕೆಜೋಳ | 90 | 1,850 |
| ಬಿಳಿಜೋಳ | 70 | 2,620 |
| ಉದ್ದು | 300 | 6,000 |
| ತೊಗರಿ | 200 | 6,000 |
| ಹೆಸರು | 146 | 7,196 |
| **ಎಣ್ಣೆಬೀಜಗಳು** | | |
| ಸೋಯಾಬೀನ್ | 170 | 3,880 |
| ಸೂರ್ಯಕಾಂತಿ | 235 | 5,885 |
| ಶೇಂಗಾ | 185 | 5,275 |
| ಗುರೆಳ್ಳು | 775 | 6,695 |
| ಎಳ್ಳು | 370 | 6,855 |